| | |
|---|---|
| 5 | ಈ ಅನುಮೋದಿತ ವಸತಿ ವಿನ್ಯಾಸ ನಕ್ಷೆ ಪ್ರದೇಶದಲ್ಲಿ ಬರುವ 'ಬಿ' ಖರಾಬು ಜಮೀನುಗಳು ಸರ್ಕಾರಕ್ಕೆ ಸೇರಿರುತ್ತದೆ. ಈ ಜಮೀನುಗಳನ್ನು ಯಥಾಸ್ಥಿತಿಯಂತೆ ಕಾಪಾಡತಕ್ಕದ್ದು ಹಾಗೂ ಇದನ್ನು ಅತಿಕ್ರಮಣ ಮಾಡಬಾರದು ಮತ್ತು ಇತರೆ ಉದ್ದೇಶಗಳಿಗಾಗಿ ಉಪಯೋಗಿಸತಕ್ಕದ್ದಲ್ಲ. |
| 6 | ನೈಸರ್ಗಿಕವಾಗಿ ಹರಿಯುವ ನದಿ/ಹಳ್ಳ/ಕೆರೆ/ನಾಲಾ ಮುಂತಾದವುಗಳಿಗೆ ವಿನ್ಯಾಸದ ಯಾವುದೇ ಮಲಿನ ನೀರನ್ನು ಬಿಡಬಾರದು. |
| 7 | ಈ ವಿನ್ಯಾಸದಲ್ಲಿನ ನಿವೇಶನಗಳನ್ನು ಮಾರಾಟ ಮಾಡುವ ಸಂದರ್ಭದಲ್ಲಿ ಸದರಿ ವಿನ್ಯಾಸವು ಪ್ರಾಧಿಕಾರದಿಂದ ಅನುಮೋದನೆ ಆಗಿರುವ ಅನುಮೋದನೆ ಸಂಖ್ಯೆ ಮತ್ತು ದಿನಾಂಕವನ್ನು ಕಡ್ಡಾಯವಾಗಿ ನಮೂದಿಸತಕ್ಕದ್ದು. |
| 8 | ಸದರಿ ಜಮೀನಿಗೆ ಸಂಬಂಧಿಸಿದಂತೆ ಯಾವುದೇ ಸಿವಿಲ್ ವ್ಯಾಜ್ಯಗಳಿಗೆ ಈ ಪ್ರಾಧಿಕಾರವು ಜವಾಬ್ದಾರಿಯಾಗಿರುವುದಿಲ್ಲ. |
| 9 | ಈ ಅನುಮೋದನೆಯು ತಾಂತ್ರಿಕವಾಗಿರುವುದರಿಂದ ಇದನ್ನು ಜಮೀನಿನ ಮೇಲಿರುವ ಹಕ್ಕನ್ನು ಅಥವಾ ಮಾಲೀಕತ್ವವನ್ನು ನಿರೂಪಿಸಲು ಉಪಯೋಗಿಸಲು ಬರುವುದಿಲ್ಲ. |
| 10 | ವಿನ್ಯಾಸದಲ್ಲಿನ ರಸ್ತೆಗಳಿಂದ ಅಕ್ಕ-ಪಕ್ಕದ ಜಮೀನುಗಳಿಗೆ ಅನುಮೋದಿತ ವಿನ್ಯಾಸ ನಕ್ಷೆಯಲ್ಲಿ ಮುಕ್ತವಾಗಿರಿಸಲಾಗಿರುವ ಸಂಪರ್ಕವನ್ನು ಯಾವುದೇ ಕಾರಣಕ್ಕೂ ನಿರ್ಬಂಧಿಸತಕ್ಕದ್ದಲ್ಲ. |
| 11 | ಮೇಲ್ಕಂಡ ಯಾವುದೇ ಷರತ್ತುಗಳನ್ನು ಹಾಗೂ ಇತರ ಯಾವುದೇ ಇಲಾಖೆಗಳು ವಿಧಿಸುವ ಷರತ್ತುಗಳನ್ನು ಉಲ್ಲಂಘಿಸಿದಲ್ಲಿ ಪ್ರಾಧಿಕಾರವು ನೀಡಿರುವ ಮಂಜೂರಾತಿಯು ಕೂಡಲೇ ರದ್ದಾಗುವುದು. |
| 12 | ಅನುಮೋದಿತ ವಿನ್ಯಾಸದಲ್ಲಿರುವ ರಸ್ತೆಗಳು, ಉದ್ಯಾನವನವನ್ನು ಸಂಪೂರ್ಣವಾಗಿ ಅಭಿವೃದ್ಧಿಪಡಿಸಿ ಈ ಪ್ರಾಧಿಕಾರದಿಂದ ತಿಳಿಸುವವರೆಗೆ ನಿರ್ವಹಣೆಯನ್ನು ಮಾಡತಕ್ಕದ್ದು ಹಾಗೂ ಸಾರ್ವಜನಿಕ ಸೌಲಭ್ಯಕ್ಕೆ ಕಾಯ್ದಿರಿಸಿದ ಪ್ರದೇಶಗಳನ್ನು ಒತ್ತುವರಿಯಾಗದಂತೆ ಸಂರಕ್ಷಿಸತಕ್ಕದ್ದು. |
| 13 | ಅನುಮೋದಿತ ವಿನ್ಯಾಸದ ಸೂಕ್ತ ಸ್ಥಳಗಳಲ್ಲಿ Strom Water Pits (SEP) ಮತ್ತು Recharge pits (RP) ಗಳನ್ನು ನಿರ್ಮಿಸಿ ವಿನ್ಯಾಸದಲ್ಲಿ ಮಳೆ ನೀರು ಕೊಯ್ಲು ಪದ್ಧತಿಯನ್ನು ಕಡ್ಡಾಯವಾಗಿ ಅಳವಡಿಸಿ ಅಂತರ್ ಜಲವೃದ್ಧಿಗೆ ಅಗತ್ಯಕ್ರಮಗಳನ್ನು ಕೈಗೊಳ್ಳುವುದು. ಪ್ರಸ್ತಾವಿತ ಪ್ರದೇಶವು ತಿಪ್ಪಗೊಂಡನಹಳ್ಳಿ ಜಲಾನಯನ ಪ್ರದೇಶದ ವಲಯ-1 (TGR-1) ರಲ್ಲಿ ಇದ್ದು. ಸದರಿ ಪ್ರದೇಶದಲ್ಲಿ ಘನತ್ಯಾಜ್ಯ ಹಾಗೂ ದ್ರವತ್ಯಾಜ್ಯವನ್ನು ವೈಜ್ಞಾನಿಕವಾಗಿ ಸಂಸ್ಕರಣೆ ಮಾಡದೇ ಹೊರ ಬಿಡುವಂತಿರುವುದಿಲ್ಲ. |
| 14 | ಈ ಪ್ರದೇಶದಲ್ಲಿ ಹಾಲಿ ಇರುವ ಗಿಡಮರಗಳನ್ನು ಸಾಧ್ಯವಾದಷ್ಟು ಮಟ್ಟಿಗೆ ಉಳಿಸಿಕೊಳ್ಳತಕ್ಕದ್ದು ಮತ್ತು ರಸ್ತೆಗಳ ಎರಡೂ ಕಡೆ ಹಾಗೂ ಉದ್ಯಾನವನಗಳಲ್ಲಿ ಹೊಸ ಸಸಿಗಳನ್ನು ಬೆಳೆಸುವುದು. |
| 15 | ಈ ಪ್ರಾಧಿಕಾರದ ಪೂರ್ವಾನುಮತಿಯಿಲ್ಲದೆ ವಿನ್ಯಾಸದಲ್ಲಿನ ಯಾವುದೇ ಬದಲಾವಣೆಯನ್ನು ಮಾಡಬಾರದು. |
| 16 | ವಿನ್ಯಾಸದಲ್ಲಿ ಕಾರ್ಯಗತಗೊಳಿಸುವ ಮೊದಲು ಸ್ಥಳೀಯ ಸಂಸ್ಥೆಯ ಕಾನೂನು ಅಡಿಯಲ್ಲಿ ಅನುಮತಿ ಪಡೆಯತಕ್ಕದ್ದು. |
| 17 | ವಿನ್ಯಾಸಗಳಲ್ಲಿಯ ನಿವೇಶನಗಳನ್ನು ಪ್ರತ್ಯೇಕವಾಗಿ ಬಿಡುಗಡೆ ಪ್ರಮಾಣ ಪತ್ರದ ಮೂಲಕ ನೀಡಲಾಗುವುದು. |
| 18 | ಉಳಿದ ಶೇಕಡ 60 ರಷ್ಟು ನಿವೇಶನಗಳ ಪೈಕಿ 2 ನೇ ಹಂತದಲ್ಲಿ ಶೇಕಡಾ 30 ರಷ್ಟು ನಿವೇಶನಗಳನ್ನು ವಿನ್ಯಾಸದಲ್ಲಿನ ಎಲ್ಲಾ ಸಿವಿಲ್ ಕಾಮಗಾರಿಗಳು ಅಂದರೆ ರಸ್ತೆ, CD Works, side drains, ಒಳಚರಂಡಿ ಕಾಮಗಾರಿ, ಮುಖ್ಯ ನೀರು ಸರಬರಾಜು ಕಾಮಗಾರಿಗಳನ್ನು ಪೂರ್ಣಗೊಳಿಸಿದ ನಂತರ ಬಿಡುಗಡೆ ಮಾಡಲಾಗುವುದು. |